**ಸಾಕ್ಷಿಯನ್ನು ದಿನಾಂಕ: 22-02-2025 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಚ್ಚುವರಿ ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದಃ**

ನನಗೆ ಕನ್ನಡ ಭಾಷೆ ಚೆನ್ನಾಗಿ ಓದಲು ಮತ್ತು ಬರೆಯಲು ಬರುವುದಿಲ್ಲ. ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತ್ರ ಆಂಗ್ಲ ಭಾಷೆಯಲ್ಲಿದೆ ಎಂದರೆ ಸರಿ. ಅದರಲ್ಲಿರುವ ಎಲ್ಲಾ ಸಂಗತಿಗಳು ನನಗೆ ಗೊತ್ತಿಲ್ಲ ಎಂದರೆ ಸಾಕ್ಷಿ ನಾನು ಕನ್ನಡದಲ್ಲಿ ಹೇಳಿದ್ದನ್ನು ಇಂಗ್ಲೀಷನಲ್ಲಿ ಬರೆಯಲಾಗಿದೆ ಎಂದು ಹೇಳುತ್ತಾರೆ.

ದಾವಾ ಆಸ್ತಿ ನಮ್ಮ ಮತ್ತು ಪ್ರತಿವಾದಿಗಳ ಪಿತ್ರಾರ್ಜಿತ ಆಸ್ತಿ ಎಂದರೆ ಸಾಕ್ಷಿ ಭಾಗ ಆಗಿದೆ ಎಂದು ಹೇಳುತ್ತಾರೆ. ದಾವಾ ಆಸ್ತಿಯ ದಾಖಲೆಗಳನ್ನು ಹಾಜರು ಮಾಡಿರುತ್ತೇನೆ. ವಿಭಾಗ ಪತ್ರವನ್ನು ನ್ಯಾಯಾಲಯಕ್ಕೆ ಹಾಜರು ಮಾಡಿರುತ್ತೇನೆ. ನಾನು ವಿಭಾಗ ಪತ್ರವನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ದಾವಾ ಜಮೀನಿನ ಆರ್.ಆರ್. ದಾಖಲೆಯಲ್ಲಿ "ಮುನಿವೆಂಕಟಪ್ಪ ಬಿನ್ ಚಿಕ್ಕಕಾಕ" ಎಂದು ನಮೂದಾಗಿದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಅದರಲ್ಲಿ ನನ್ನ ತಂದೆಯಾದ ರಾಮಯ್ಯನ ಹೆಸರು ಇದೆ ಎಂದು ಹೇಳುತ್ತಾರೆ. ದಾವಾ ಜಮೀನಿನ ಪಹಣಿ ಪತ್ರಿಕೆಗಳಲ್ಲಿ 1968 ನೇ ಸಾಲಿನಿಂದ 1979 ರ ವರೆಗೆ "ಮುನಿವೆಂಕಟಪ್ಪ ಬಿನ್ ಚಿಕ್ಕಕಾಕ" ಎನ್ನುವ ಹೆಸರು ಇದೆ ಎಂದರೆ ಸರಿಯಲ್ಲ. ಮುನಿವೆಂಕಟಪ್ಪ ಬಿನ್ ಚಿಕ್ಕಕಾಕ ಮಕ್ಕಳು ಬದುಕಿರುತ್ತಾರೆ. ಅವರ ಹೆಸರು ಕೃಷ್ಣಪ್ಪ, ಗೌಡಪ್ಪ ಮತ್ತು ಕಾಕಪ್ಪ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಹಾಜರು ಮಾಡಿರುವ ಛಾಯಾ ಚಿತ್ರಗಳು ದಾವಾ ಆಸ್ತಿಗೆ ಸಂಬಂಧಿಸಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ಪ್ರತಿವಾದಿಗಳು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾನು ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿ ನನ್ನ ವಿರುದ್ಧ ವಿಭಾಗಕ್ಕಾಗಿ ಅಸಲು ದಾವಾ ಸಂಖ್ಯೆಃ 857/2008 ನ್ನು ಸಲ್ಲಿಸಿದ್ದ ಎಂದರೆ ಸರಿ. ಸದರಿ ದಾವೆಯಲ್ಲಿ ಈ ದಾವೆಯ ಆಸ್ತಿಯನ್ನು ಸಹ ಸೇರಿಸಲಾಗಿತ್ತು ಎಂದರೆ ಸರಿಯಲ್ಲ. ನಾನು ಹಾಜರು ಮಾಡಿರುವ ಪಹಣಿ ಪತ್ರಿಕೆಗಳಲ್ಲಿ ನಮೂದಿಸಿರುವ ಆರ್.ಆರ್. ನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ಚಿಕ್ಕಕಾಕಪ್ಪನ ತಂದೆಯ ಹೆಸರು ನನಗೆ ಗೊತ್ತಿಲ್ಲ. ಚಿಕ್ಕಕಾಕಪ್ಪನ ತಂದೆಯ ಹೆಸರು ರಾಮಯ್ಯ ಎಂದರೆ ನನಗೆ ಗೊತ್ತಿಲ್ಲ. ದಾಖಲೆಗಳನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಹಾಜರು ಮಾಡಿದ್ದೇನೆ ಎಂದರೆ ಸರಿಯಲ್ಲ. ದಾಖಲೆಗಳು ಕಾನೂನು ಬದ್ಧವಾಗಿ ಬದಲಾಗಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ ಪಿತ್ರಾರ್ಜಿತ ಆಸ್ತಿ ಮತ್ತು ಅದರಲ್ಲಿ

ಪ್ರತಿವಾದಿಗೆ ಹಕ್ಕಿದೆ ಎಂದರೆ ಸರಿಯಲ್ಲ. ದಾಖಲೆಗಳನ್ನು ಅಕ್ರಮವಾಗಿ ಸೃಷ್ಟಿ ಮಾಡಿ ಹಾಜರು ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**